**Akashvani : Bangalore**
**Regional Bulletin In Kannada**
**15.03.2025 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**15.03.2025 / 18.40  hrs**
**<><*<><>*><>**

ಮುಖ್ಯಾಂಶಗಳು

**೧. ರಾಜ್ಯದ ಪೊಲೀಸ್ ಸಿಬ್ಬಂದಿಗೆ ಸೈಬರ್ ಅಪರಾಧ ಪತ್ತೆ ಕುರಿತು ತರಬೇತಿ**

**೨. ಸರ್ಕಾರಿ ಗುತ್ತಿಗೆಗಳಲ್ಲಿ ಅಲ್ಪಸಂಖ್ಯಾತರಿಗೆ ಶೇಖಡ ನಾಲ್ಕರಷ್ಟು ಮೀಸಲಾತಿಯು ಮುಸ್ಲಿಮರಿಗೆ ಮಾತ್ರ ಸೀಮಿತವಲ್ಲ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೩. ಬೆಳಗಾವಿ ಮಹಾನಗರ ಪಾಲಿಕೆ; ಮಂಗೇಶ ಪವಾರ್ ಮೇಯರ್ ಆಗಿ, ವಾಣಿ ಜೋಶಿ ಉಪ ಮೇಯರ್ ಆಗಿ ಆಯ್ಕೆ**

**೪. ಗ್ರೇಟರ್ ಬೆಂಗಳೂರು ವಿಧೇಯಕ ವಿರೋಧಿಸಿ ಜೆಡಿಎಸ್ ಪ್ರತಿಭಟನೆ**

**<><*<><>*><>**

ರಾಜ್ಯದ ಪ್ರತಿಯೊಬ್ಬ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ಸೈಬರ್ ಅಪರಾಧಗಳ ಕುರಿತು ಹೆಚ್ಚಿನ ಅರಿವು ಮತ್ತು ತರಬೇತಿ ನೀಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.  ಸೈಬರ್ ಅಪರಾಧ ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿಂದು ರಾಜ್ಯ ಪೊಲೀಸ್, ಇನ್ಫೋಸಿಸ್ ಹಾಗೂ ಡಿಎಸ್‌ಸಿಐ ಸಹಯೋಗದಲ್ಲಿ ಆಯೋಜಿಸಿದ್ದ ಸೈಬರ್ ಅಪರಾಧ ತನಿಖಾ ಶೃಂಗಸಭೆಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಡಿಜಿಟಲ್ ಮಾಧ್ಯಮ ಮಹತ್ವ ಪಡೆದುಕೊಳ್ಳುತ್ತಿರುವ ನಡುವೆಯೇ ಸೈಬರ್ ಅಪರಾಧವು ಸವಾಲಾಗಿ ಪರಿಣಮಿಸುತ್ತಿದೆ. ಭೌಗೋಳಿಕ ಗಡಿ ಮಿತಿ ಇಲ್ಲದೆ ಅಪರಾಧ ನಡೆಯುತ್ತಿದ್ದು, ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವುದು ಪೊಲೀಸರಿಗೆ ಸವಾಲಾಗಿದೆ ಎಂದು ಹೇಳಿದರು. ವಿಧಾನಸಭೆಯಲ್ಲಿಯೂ ಸೈಬರ್ ಅಪರಾಧದ ಬಗ್ಗೆ ಸಾಕಷ್ಟು ಚರ್ಚೆಗಳಾಗುತ್ತಿದ್ದು, ಈ ದಿಸೆಯಲ್ಲಿ ದೇಶದಲ್ಲಿ ಮೊದಲ ಬಾರಿಗೆ ಇಂತಹ ಶೃಂಗಸಭೆ ಮೂಲಕ ಅರಿವು ಮೂಡಿಸಲಾಗುತ್ತದೆ ಎಂದರು. ಇನ್ಫೋಸಿಸ್ ಫೌಂಡೇಶನ್‌ನ ಸುನೀಲ್ ಕುಮಾರ್ ಧಾರೇಶ್ವರ್ ಮಾತನಾಡಿ, ಸೈಬರ್ ಅಪರಾಧಕ್ಕೆ ಗಡಿ ಎನ್ನುವುದಿಲ್ಲ. ಜಗತ್ತು ಎದುರಿಸುತ್ತಿರುವ ಪ್ರಮುಖ ಸವಾಲು ಸೈಬರ್ ಅಪರಾಧವಾಗಿದ್ದು, ಇದನ್ನು ಹತ್ತಿಕ್ಕಲು ರಾಜ್ಯ ಸರ್ಕಾರದೊಂದಿಗೆ ಇನ್ಫೋಸಿಸ್ ಕೈಜೋಡಿಸಿದೆ ಎಂದು ಹೇಳಿದರು.

**<><*<><>*><>**

ಬೇಲೂರು ತಾಲೂಕಿನ ಬಿಕ್ಕೋಡು, ಅರೆಹಳ್ಳಿ ಸುತ್ತಮುತ್ತ ಜನರಿಗೆ ಉಪಟಳ ನೀಡುತ್ತಿರುವ ೩ ಪುಂಡಾನೆಗಳನ್ನು ಗುರುತಿಸಿದ್ದು, ಈ ಆನೆಗಳನ್ನು ಸೆರೆ ಹಿಡಿಯಲು ಮತ್ತು ಕೂಡಲೇ ಈ ಪ್ರದೇಶದಲ್ಲಿ ಆನೆ ಕಾರ್ಯಪಡೆಯ ಕಚೇರಿ ಸ್ಥಾಪಿಸಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ದರ್ಜೆಯ ಅಧಿಕಾರಿಯನ್ನು ನಿಯೋಜಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೇಲೂರು ತಾಲೂಕು

ಕೋಗೋಡಿನ ತೋಟದಲ್ಲಿ ನಿನ್ನೆ ಮಹಿಳೆಯೊಬ್ಬರು ಆನೆ ದಾಳಿಯಿಂದ ಮೃತಪಟ್ಟ ಹಿನ್ನೆಲೆಯಲ್ಲಿ ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಅರಣ್ಯಾಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದ ಸಚಿವರು, ಹಾಸನ ವಲಯಕ್ಕಾಗಿ ೨ ಥರ್ಮಲ್ ಕ್ಯಾಮೆರಾ ಸಹಿತ ಡ್ರೋನ್ ಖರೀದಿಸಿ, ರಾತ್ರಿಯ ವೇಳೆ ಕೂಡ ಆನೆಗಳ ಸಂಚಾರದ ಬಗ್ಗೆ ನಿಗಾ ಇಟ್ಟು, ಸ್ಥಳೀಯರಿಗೆ ಸಕಾಲದಲ್ಲಿ ಮಾಹಿತಿ ನೀಡುವಂತೆ ಸೂಚಿಸಿದರು. ಆನೆಗಳ ಸಮಸ್ಯೆ ಹೆಚ್ಚಿರುವ ಪ್ರದೇಶದಲ್ಲಿ ತುರ್ತು ಸ್ಪಂದನೆಗಾಗಿ ೨ ಹೆಚ್ಚುವರಿ ಜೀಪುಗಳು ಮತ್ತು ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿ, ಆನೆಗಳ ಸಂಚಾರದ ಮಾಹಿತಿ ಬಂದ ಕೂಡಲೇ ಸ್ಪಂದಿಸುವಂತೆ ಅವರು ನಿರ್ದೇಶಿಸಿದರು.

**<><*<><>*><>**

ಸರ್ಕಾರಿ ಗುತ್ತಿಗೆಗಳಲ್ಲಿ ಅಲ್ಪಸಂಖ್ಯಾತರಿಗೆ ಶೇಖಡ ನಾಲ್ಕರಷ್ಟು ಮೀಸಲಾತಿ ನೀಡುವ ರಾಜ್ಯ ಸರ್ಕಾರದ ನಿರ್ಧಾರವು ಮುಸ್ಲಿಮರಿಗೆ ಮಾತ್ರ ಸೀಮಿತವಾಗಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಅಲ್ಪಸಂಖ್ಯಾತರ ಹಕ್ಕನ್ನು ಅವರಿಗೆ ನೀಡಲಾಗುತ್ತಿದ್ದು, ಗುತ್ತಿಗೆ ಮೀಸಲಾತಿ ಎಲ್ಲಾ ಅಲ್ಪಸಂಖ್ಯಾತ ಸಮುದಾಯಗಳು ಮತ್ತು ಹಿಂದುಳಿದ ವರ್ಗಗಳಿಗೆ ಅನ್ವಯಿಸುತ್ತದೆ ಎಂದರು. ಅಲ್ಪಸಂಖ್ಯಾತ ಗುತ್ತಿಗೆದಾರರಿಗೆ ಗುತ್ತಿಗೆಗಳಲ್ಲಿ ಶೇಖಡ ನಾಲ್ಕು ಮೀಸಲಾತಿ ನೀಡುವ ಗುರಿಯನ್ನು ಹೊಂದಿರುವ ರಾಜ್ಯ ಸರ್ಕಾರ, ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ ತಿದ್ದುಪಡಿಗೆ ನಿನ್ನೆ ನಡೆದ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿತ್ತು.

**<><*<><>*><>**

ಬೆಳಗಾವಿ ಮಹಾನಗರ ಪಾಲಿಕೆಯ ಮೇಯರ್ ಮತ್ತು ಉಪಮೇಯರ್ ಸ್ಥಾನಗಳಿಗೆ ಇಂದು ಚುನಾವಣೆ ನಡೆದು, ಮೇಯರ್ ಆಗಿ ಮಂಗೇಶ ಪವಾರ್ ಹಾಗೂ ಉಪ ಮೇಯರ್ ಆಗಿ ವಾಣಿ ಜೋಶಿ ಅವಿರೋಧವಾಗಿ ಆಯ್ಕೆ ಆಗಿದ್ದಾರೆ. ಮೇಯರ್ ಸ್ಥಾನವು ಸಾಮಾನ್ಯ ಹಾಗೂ ಉಪ ಮೇಯರ್ ಸ್ಥಾನವು ಸಾಮಾನ್ಯ ಮಹಿಳೆಗೆ ಮೀಸಲಾಗಿತ್ತು. ೪೦ ಸದಸ್ಯರನ್ನು ಹೊಂದಿರುವ ಬಿಜೆಪಿ ಮತ್ತೊಮ್ಮೆ ಪಾಲಿಕೆಯಲ್ಲಿ ತನ್ನ ಪ್ರಭುತ್ವ ಸಾಧಿಸಿದೆ.

**<><*<><>*><>**

ಬೆಂಗಳೂರು ನಗರದಲ್ಲಿ ಕನ್ನಡಿಗರನ್ನು ಒಡೆದು ಆಳುವ ದುರುದ್ದೇಶದಿಂದ ರಾಜ್ಯ ಸರಕಾರ ಬಿಬಿಎಂಪಿಯನ್ನು ಗ್ರೇಟರ್ ಬೆಂಗಳೂರು ಹೆಸರಿನಲ್ಲಿ ಏಳು ಭಾಗಗಳನ್ನಾಗಿ ಮಾಡಲು ಹೊರಟಿದೆ ಎಂದು ಜೆಡಿಎಸ್ ಆರೋಪಿಸಿದೆ. ಗ್ರೇಟರ್ ಬೆಂಗಳೂರು ರಚನೆಯ ವಿರುದ್ಧ ಜೆಡಿಎಸ್ ಕಾರ್ಯರ್ತರು ಬೆಂಗಳೂರು ನಗರದ ಫ್ರೀಡಂ ಪಾರ್ಕ್‌ನಲ್ಲಿ ಇಂದು ಬೃಹತ್ ಪ್ರತಿಭಟನೆ ನಡೆಸಿದರು. ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿದ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಹೆಚ್.ಎಂ.ರಮೇಶ್ ಗೌಡ, ಬೆಂಗಳೂರು ಜನರ ಭಾವನೆಗಳಿಗೆ ವಿರುದ್ಧವಾಗಿ ಕಾಂಗ್ರೆಸ್ ಸರಕಾರ, ಗ್ರೇಟರ್ ಬೆಂಗಳೂರು ವಿಧೇಯಕವನ್ನು ವಿಧಾನಮಂಡಲದಲ್ಲಿ ಅನುಮೋದನೆ ಪಡೆದುಕೊಂಡಿದೆ. ರಾಜ್ಯಪಾಲರು ಯಾವುದೇ ಕಾರಣಕ್ಕೂ ಈ ವಿಧೇಯಕಕ್ಕೆ ಸಹಿ ಹಾಕಬಾರದು. ಆ ವಿಧೇಯಕ ತಿರಸ್ಕರಿಸಬೇಕು ಎಂದು ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಉದ್ಯೋಗ ಮೇಳ ಆಯೋಜಿಸಲಾಗುವುದು ಎಂದು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಶಿವಕಾಂತಮ್ಮ ನಾಯಕ್ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಜಿಲ್ಲಾಡಳಿತದ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈಗಾಗಲೇ ರಾಜ್ಯದ ೧೫ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಮುಂದಿನ ತಿಂಗಳು ಕಲಬುರುಗಿಯಲ್ಲಿ ಏರ್ಪಡಿಸಲಾಗಿದೆ ಎಂದು ತಿಳಿಸಿದರು

**ಧ್ವನಿ: ಶಿವಕಾಂತಮ್ಮ ನಾಯಕ್(೨೫ ಸೆಕೆಂಡ್ಸ್)**

ಉದ್ಯೋಗ ಮೇಳದಲ್ಲಿ ೭ ಸಾವಿರದ ೫೦೦ಕ್ಕೂ ಅಧಿಕ ಉದ್ಯೋಗಕಾಂಕ್ಷಿಗಳು ಮತ್ತು ೧೨೦ ಕಂಪನಿಗಳು ಭಾಗವಹಿಸಿದ್ದವು.

**<><*<><>*><>**

ರಾಜ್ಯ ಸರ್ಕಾರಗಳು ರೈಲ್ವೆ ಕೆಳಸೇತುವೆ, ಮೇಲ್ಸೇತುವೆ ಕಾಮಗಾರಿಗಳಿಗೆ ಅನುದಾನದ ನೀಡದೇ ಇರುವುದನ್ನು ಮನಗಂಡು, ಪ್ರಧಾನಿ ನರೇಂದ್ರ ಮೋದಿ ಅವರು ಇಂದು ದೇಶದ ಎಲ್ಲ ರೈಲ್ವೆ ಕೆಳಸೇತುವೆ ಹಾಗೂ ಮೇಲ್ಸೇತುವೆಗಳನ್ನು ಕೇಂದ್ರ ಸರ್ಕಾರದ ವತಿಯಿಂದ ನಿರ್ಮಾಣ ಮಾಡಲು ಕ್ರಮಕೈಗೊಂಡಿದ್ದಾರೆ ಎಂದು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರು ನಗರದ ಶೆಟ್ಟಿಹಳ್ಳಿ ಬಳಿ ಪಾದಚಾರಿ ಸುರಂಗ ಮಾರ್ಗ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಏಪ್ರಿಲ್ ೩೦ ರೊಳಗೆ ಸುಮಾರು ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ತುಮಕೂರು ಹಾಗೂ ಹಾಸನ ಜಿಲ್ಲೆಯ ಲೆವೆಲ್ ಕ್ರಾಸಿಂಗ್ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ಈ ಕಾಮಗಾರಿಗಳನ್ನು ಮುಂಬರುವ ೨೦೨೭ ರೊಳಗೆ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು ಎಂದು ಅವರು ಹೇಳಿದರು.

**<><*<><>*><>**

ಚಿಕ್ಕಬಳ್ಳಾಪುರ ಜಿಲ್ಲೆಯ ಹಾಲು ಉತ್ಪಾದಕರಿಗೆ ಚಿಮುಲ್, ಇಂದಿನಿಂದ ಮೇ ೧೫ ರವರೆಗೆ ಹಾಲಿನ ದರದಲ್ಲಿ ಒಂದು ರೂಪಾಯಿಯನ್ನು ಹೆಚ್ಚುವರಿಯಾಗಿ ನೀಡಿ ಪ್ರೋತ್ಸಾಹಿಸಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಮುಲ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ವರ್ಷದ ಜನವರಿ ೧ ರಿಂದ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ- ಚಿಮುಲ್ ಅಸ್ತಿತ್ವಕ್ಕೆ ಬಂದಿದ್ದು, ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ-ಕೋಚಿಮುಲ್‌ನಿಂದ ವಿಭಜನೆಯಾಗಿ ಶೇಕಡ ೫೩:೪೭ ರ ಅನುಪಾತದ ಆಧಾರದಲ್ಲಿ ಒಕ್ಕೂಟದ ಸ್ಥಿರಾಸ್ತಿ, ಚರಾಸ್ತಿಗಳು ಎರಡೂ ಜಿಲ್ಲೆಗಳಿಗೆ ಹಂಚಿಕೆಯಾಗಲು ಸೌಹಾರ್ದಯುತ ಒಪ್ಪಂದವಾಗಿದೆ. ಈ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

**<><*<><>*><>**

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ವತಿಯಿಂದ ರಾಜಭವನದ ಹುಲ್ಲು ಹಾಸಿನ ಆವರಣದಲ್ಲಿ ಇದೇ ೧೭ ರಂದು ಸಂಜೆ ೪ ಗಂಟೆಗೆ ರಾಜ್ಯ ಪುರಸ್ಕಾರ ಪ್ರದಾನ ಸಮಾರಂಭ ಜರುಗಲಿದೆ. ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ  ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಉತ್ತಮ ಸಾಧನೆಗೈದ ೫೦೦ ಸ್ಕೌಟ್ಸ್ ಮತ್ತು ಗೈಡ್‌ಗಳಿಗೆ ಪುರಸ್ಕಾರ ಪ್ರದಾನ ಮಾಡಲಾಗುವುದು ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ತಿಳಿಸಿದ್ದಾರೆ.

**<><*<><>*><>**

ಉಪ ಲೋಕಾಯುಕ್ತ ನ್ಯಾಯಾಧೀಶರಾದ ಬಿ ವೀರಪ್ಪ ಅವರು ವಿಜಯನಗರ ಜಿಲ್ಲೆಯ ಹೊಸಪೇಟೆಯ ನಗರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಇಂದು ಭೇಟಿ ನೀಡಿ, ಪರಿಶೀಲಿಸಿದರು. ಸಂಕ್ಲಾಪುರ ಸಮೀಪ ೫೫ ಎಕರೆ ಪ್ರದೇಶದಲ್ಲಿ ನಗರಸಭೆ ಘನತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸಲಾಗಿದ್ದು, ಪ್ರತಿನಿತ್ಯ ಹೊಸಪೇಟೆ ನಗರದಿಂದ ಉತ್ಪತ್ತಿಯಾಗುವ ೧೩೦ ಟನ್ ಘನತ್ಯಾಜ್ಯವನ್ನು ಈ ಘಟಕದಲ್ಲಿ ಸಂಗ್ರಹಿಸಿ, ಹಸಿ ಕಸ, ಒಣ ಕಸವನ್ನು ಬೇರ್ಪಡಿಸಿ, ಇದನ್ನು ಕಾಂಪೋಸ್ಟ್ ಗೊಬ್ಬರವನ್ನಾಗಿ ತಯಾರಿಸಿರುವುದನ್ನು ವೀಕ್ಷಿಸಿದರು. ನಂತರ ಹೊಸಪೇಟೆ ನಗರದ ಉಪ ಕಾರಾಗೃಹಕ್ಕೆ ಭೇಟಿ ನೀಡಿದ ಉಪಲೋಕಾಯುಕ್ತರು, ಜೈಲಿನಲ್ಲಿರುವ ವಿಚಾರಣಾಧೀನ ಕೈದಿಗಳಿಗೆ ನೀಡಲಾಗುತ್ತಿರುವ ಆಹಾರ, ಕುಡಿಯುವ ನೀರನ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

**<><*<><>*><>**

ಚಿತ್ರದುರ್ಗ ಜಿಲ್ಲೆಯ ನಾಯಕನಹಟ್ಟಿ ಶ್ರೀಗುರು ತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವದಲ್ಲಿ ಪ್ರಾಣಿ ಬಲಿ ಕೈಬಿಟ್ಟು, ಅಹಿಂಸಾತ್ಮಕವಾಗಿ ಸಾತ್ವಿಕ ಪೂಜೆ ಸಲ್ಲಿಸಲು, ಭಕ್ತರಲ್ಲಿ ಜಾಗೃತಿ ಮೂಡಿಸಲು, ಅಹಿಂಸಾ ಪ್ರಾಣಿ ದಯಾ ಆಧ್ಯಾತ್ಮ ಸಂದೇಶ ಯಾತ್ರೆಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಇಂದು ಚಾಲನೆ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವ ಪ್ರಾಣಿ ಕಲ್ಯಾಣ ಮಂಡಳಿ ವತಿಯಿಂದ ಪ್ರಾಣಿ ಬಲಿ ತಡೆ ಜಾಗೃತಿಗಾಗಿ ಜನತೆಯಲ್ಲಿ ಜಾಗೃತಿ ಮೂಡಿಸುವ ಅಹಿಂಸಾ ಪ್ರಾಣಿ ದಯಾ ಆಧ್ಯಾತ್ಮ ಸಂದೇಶ ಯಾತ್ರೆಗೆ ಚಾಲನೆ ನೀಡಲಾಯಿತು. ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಸಾರ್ವಜನಿಕ ಸ್ಥಳ, ಧಾರ್ಮಿಕ ಸ್ಥಳಗಳಲ್ಲಿ ಪ್ರಾಣಿಗಳ ವಧೆ ಆಗದಂತೆ ಎಲ್ಲರೂ ಜಾಗೃತಿ ವಹಿಸಬೇಕು ಎಂದು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**